**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 89/2015**

| | | |
|---|---|---|
| ಸಾಕ್ಷಿದಾರರ ಹೆಸರು | : | ನಿರಂಜನ್ ಕಟ್ಟಿ |
| ತಂದೆಯ ಹೆಸರು | : | ಶ್ರೀಕಾಂತ್ ಕಟ್ಟಿ |
| ವಯಸ್ಸು | : | 35 ವರ್ಷ |
| ಉದ್ಯೋಗ | : | ಉಪ-ವಲಯ ಅರಣ್ಯಾಧಿಕಾರಿ, ಮೇಟಿಕುಪ್ಪೆ ವಲಯ, ಅಗಸನಹುಂಡಿ ಶಾಖೆ. |
| ವಾಸಸ್ಥಳ | : | ಕಲ್ಲಹಟ್ಟಿ ತನಿಖಾ ಠಾಣೆ, ಹೆಚ್.ಡಿ. ಕೋಟೆ ತಾ. |

**ಸಾಕ್ಷಿಯನ್ನು ದಿನಾಂಕಃ 28.08.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿಗಳ ಪರ ಸರ್ಕಾರಿ ವಕೀಲರಿಂದಃ**

ನಾನು ದಿನಾಂಕಃ 04.06.2019 ರಿಂದ ಮೇಟಿಕುಪ್ಪೆ ವನ್ಯಜೀವಿ ವಲಯದ ಅಗಸನಹುಂಡಿ ಶಾಖೆಯಲ್ಲಿ ಉಪ-ವಲಯ ಅರಣ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ನನ್ನ ಮೇಲಾಧಿಕಾರಿಗಳಾದ ವಲಯ ಅರಣ್ಯಾಧಿಕಾರಿಗಳು ಈ ಪ್ರಕರಣದಲ್ಲಿ ಸಾಕ್ಷ್ಯ ನುಡಿಯಲು ಅಧಿಕಾರ ಪತ್ರ ನೀಡಿದ್ದು, ಅದರಂತೆ ನಾನು ನನ್ನ ಮುಖ್ಯ ವಿಚಾರಣೆಯ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಮೇಟಿಕುಪ್ಪೆ ವಲಯದ ವಲಯ ಅರಣ್ಯಾಧಿಕಾರಿಗಳು ನೀಡಿರುವ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಡಿ.-3 ಎಂದು ಗುರುತಿಸಲಾಯಿತು.

ಸಾಗುವಳಿ ಪತ್ರದ ಡಿಮ್ಯಾಂಡ್ ರಿಜಿಸ್ಟರ್ ಪ್ರತಿ ಮತ್ತು ನಕ್ಷೆ ಕೋರಿ ತಹಶೀಲ್ದಾರ್ ರವರಿಗೆ ಬರೆದ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಡಿ.-4 ಎಂದು ಗುರುತಿಸಲಾಯಿತು.

ನಮ್ಮ ಉಪ-ವಲಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಈ ಪ್ರಕರಣದ ಬಗ್ಗೆ ಮಾಹಿತಿ ನೀಡಿ ಪ್ರಕರಣ ಮುಂದುವರಿಸಲು ಸೂಕ್ತ ಮಾರ್ಗದರ್ಶನ ಕೋರಿ ಬರೆದ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಡಿ.-5 ಎಂದು ಗುರುತಿಸಲಾಯಿತು.

ಜವರಯ್ಯ ಎಂಬುವವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಡಿ.-6 ಎಂದು ಗುರುತಿಸಲಾಯಿತು.

ತಹಶೀಲ್ದಾರ್ ರವರು ನೀಡಿರುವ 02 ನಕ್ಷೆಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಡಿ.-7 ಮತ್ತು ನಿ.ಡಿ.-8 ಎಂದು ಗುರುತಿಸಲಾಯಿತು.

ಸ್ಯಾಟಲೈಟ್ ಸ್ಕೆಚ್ ನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಡಿ.-9 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ವಕೀಲರು ಮುಂದಿನ ಮುಖ್ಯ ವಿಚಾರಣೆಗಾಗಿ ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**